ಕರ್ನಾಟಕ ಸರ್ಕಾರ

**ಶಾಲಾ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ ನೃಪತುಂಗ ರಸ್ತೆ, ಬೆಂಗಳೂರು-560001**

DPI-CPI0ADM2(OTH)/160/2026 **E-** 2151017 **ದಿನಾಂಕ :** 15.05.2026

**ಸುತ್ತೋಲೆ**

**ವಿಷಯ** : ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಶಾಲೆಗಳಲ್ಲಿ ನಾಡಗೀತೆಯನ್ನು ಕಡ್ಡಾಯವಾಗಿ ಹಾಡುವ ಸ್ವನಿಯಂತ್ರಿತ ವ್ಯವಸ್ಥೆಯನ್ನು ರೂಪಿಸುವ ಬಗ್ಗೆ.

**ಉಲ್ಲೇಖ** : 1. ಸರ್ಕಾರದ ಪತ್ರ ಸಂಖ್ಯೆ : ಇಪಿ 03 ಪಿಎಂಸಿ 2026 ದಿನಾಂಕ : 16.01.2026

2. ಸರ್ಕಾರದ ಆದೇಶ ಸಂಖ್ಯೆ : ಸಂ ಕ ಇ 207 ಕಸದ 2003 ದಿನಾಂಕ : 7.01.2004

3. ಈ ಕಛೇರಿ ಸುತ್ತೋಲೆ ಸಂಖ್ಯೆ : ದೈಶಿ4/ಯೋಜನೆ/ಅಧಿ.ಸಭೆ/20/2002-03

***

ಕರ್ನಾಟಕ ರಾಜ್ಯವು ಸಾಂಸ್ಕೃತಿಕ ಪರಂಪರೆ ಮತ್ತು ಭಾಷಾ ಅಸ್ಮಿತೆಯನ್ನು ಗೌರವಿಸುವ ರಾಜ್ಯವಾಗಿದೆ. "***ಜಯ ಭಾರತ ಜನನಿಯ ತನುಜಾತೆ***" ಎಂಬ ಕುವೆಂಪು ಅವರ ನಾಡಗೀತೆಯು ಕರ್ನಾಟಕದ ಏಕತೆ, ಭ್ರಾತೃತ್ವ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಪ್ರತಿಬಿಂಬಿಸುತ್ತದೆ. ವಿದ್ಯಾರ್ಥಿಗಳಲ್ಲಿ ರಾಜ್ಯಾಭಿಮಾನ, ದೇಶಭಕ್ತಿ ಮತ್ತು ಸಾಂಸ್ಕೃತಿಕ ಅರಿವನ್ನು ಬೆಳೆಸುವ ದೃಷ್ಟಿಯಿಂದ ನಾಡಗೀತೆಯನ್ನು ಶಾಲೆಗಳಲ್ಲಿ ಕಡ್ಡಾಯವಾಗಿ ಹಾಡುವುದು ಅಗತ್ಯವಾಗಿದೆ. ಆದ್ದರಿಂದ ಈ ಕೆಳಗಿನ ನಿರ್ದೇಶನಗಳನ್ನು ಎಲ್ಲಾ ಶಾಲೆಗಳು ಕಡ್ಡಾಯವಾಗಿ ಪಾಲಿಸಬೇಕು ರಾಜ್ಯದ ಸರ್ಕಾರಿ, ಅನುದಾನಿತ, ಅನುದಾನರಹಿತ ಎಲ್ಲಾ ಪ್ರಾಥಮಿಕ, ಪ್ರೌಢ ಶಾಲೆಗಳು ಕಟ್ಟು ನಿಟ್ಟಾಗಿ ಪಾಲಿಸಲು ಸೂಚಿಸಿದೆ. ತಪ್ಪಿದಲ್ಲಿ ಆಯಾಯ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು.

**ದಿನಚರಿಯ ಅಂಗವಾಗಿ** : ಪ್ರತಿದಿನ ಪ್ರಾರ್ಥನಾ ಸಮಯದಲ್ಲಿ ನಾಡಗೀತೆಯನ್ನು ಸಾಮೂಹಿಕವಾಗಿ, ಲಯಬದ್ಧವಾಗಿ ಸರಿಯಾದ ಉಚ್ಚಾರಣೆಯೊಂದಿಗೆ ನಿಗದಿತ ಸಮಯದಲ್ಲಿ ಹಾಡಬೇಕು. ನಾಡಗೀತೆಯನ್ನು ಶುದ್ಧ ಕನ್ನಡದಲ್ಲಿ, ಸರಿಯಾದ ಸ್ವರ ಮತ್ತು ಲಯದೊಂದಿಗೆ ಹಾಡಲು ಸಂಗೀತ ಶಿಕ್ಷಕರ ಮೂಲಕ ವಿದ್ಯಾರ್ಥಿಗಳಿಗೆ ತರಬೇತಿ ನೀಡಬೇಕು.

**ವಿಶೇಷ ದಿನಗಳು**: ಸ್ವಾತಂತ್ರ್ಯ ದಿನಾಚರಣೆ , ಗಣರಾಜ್ಯೋತ್ಸವ, ಕನ್ನಡ ರಾಜ್ಯೋತ್ಸವ, ಮುಂತಾದ ರಾಷ್ಟ್ರೀಯ ಹಬ್ಬ ಮತ್ತು ನಾಡ ಹಬ್ಬಗಳ ಸಂದರ್ಭಗಳಲ್ಲಿ ಹಾಗೂ ಶಾಲಾ ವಾರ್ಷಿಕೋತ್ಸವ ಮತ್ತು ಇತರ ರಾಜ್ಯ ಮಟ್ಟದ ಕಾರ್ಯಕ್ರಮಗಳಲ್ಲಿ ನಾಡಗೀತೆಯನ್ನು ಕಡ್ಡಾಯವಾಗಿ ಹಾಡಬೇಕು.

**ಅರ್ಥದ ಅರಿವು** : ನಾಡಗೀತೆಯ ಅರ್ಥ ಮತ್ತು ಮಹತ್ವವನ್ನು ವಿದ್ಯಾರ್ಥಿಗಳಿಗೆ ಕನ್ನಡ ಭಾಷಾ ಶಿಕ್ಷಕರ ಮೂಲಕ ತಿಳಿಸಬೇಕು, ಇದರಿಂದ ಅವರು ಅದರ ಭಾವವನ್ನು ಅರ್ಥಮಾಡಿಕೊಂಡು ಸ್ವಯಂಪ್ರೇರಣೆಯಿಂದ ಹಾಡಲು ಅನುಕೂಲವಾಗುತ್ತದೆ.

**ಪಾಲನೆ**: ಈ ಸುತ್ತೋಲೆಯ ಪಾಲನೆಯನ್ನು ಶಾಲಾ ಆಡಳಿತ ಮಂಡಳಿಯ ಸಹಕಾರದೊಂದಿಗೆ, ಶಾಲಾ ಮುಖ್ಯೋಪಾಧ್ಯಾಯರು, ದೈಹಿಕ ಶಿಕ್ಷಕರು ಮತ್ತು ಇತರ ಶಿಕ್ಷಕರು ನಿಯತಕಾಲಿಕವಾಗಿ ಪರಿಶೀಲಿಸಬೇಕು. ಈ ನಿರ್ದೇಶನವನ್ನು ಕೂಡಲೇ ಜಾರಿಗೆ ತಂದು, ಶಾಲೆಗಳಲ್ಲಿ ಪ್ರತೀ ದಿನ ಕಡ್ಡಾಯವಾಗಿ ಪಾಲಿಸಲು ಕ್ರಮವಹಿಸಬೇಕು.

ನಾಡಗೀತೆಯನ್ನು ಹಾಡುವಾಗ ವಿದ್ಯಾರ್ಥಿಗಳಲ್ಲಿ ಶಿಸ್ತು, ಗೌರವ ಮತ್ತು ಏಕತೆಯ ಭಾವನೆ ಮೂಡಿಸುವುದು ಮುಖ್ಯ ಉದ್ದೇಶ. ಇದನ್ನು ವಿದ್ಯಾರ್ಥಿಗಳು ಯಾವುದೇ ರೀತಿಯ ಒತ್ತಡ ಅಥವಾ ಬಾಹ್ಯ ಪ್ರಭಾವ ಇಲ್ಲದೆ ಸ್ವಯಂ ಪ್ರೇರಣೆಯಿಂದ ಹಾಡುವ ವಾತಾವರಣ ಸೃಷ್ಟಿಸಬೇಕು. ಈ ಸುತ್ತೋಲೆಯನ್ನು ಶಾಲೆಯ ನೋಟಿಸ್ ಬೋರ್ಡ್‌ನಲ್ಲಿ ಪ್ರದರ್ಶಿಸಿ ಇದರ ಹಿನ್ನೆಲೆ ಮತ್ತು ಮಹತ್ವ ವನ್ನು ಪೋಷಕರಿಗೂ ತಿಳಿಸಲು ಕ್ರಮವಹಿಸಲು ಸೂಚಿಸಿದೆ.

(ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

15/5/2026

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

ಪ್ರತಿಗಳು :

1. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳು ಕರ್ನಾಟಕ ಸರ್ಕಾರ ರವರ ಮಾಹಿತಿಗಾಗಿ

2. ಅಪರ ಮುಖ್ಯ ಕಾರ್ಯದರ್ಶಿಗಳು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಬಹುಮಹಡಿಗಳ ಕಟ್ಟಡ ಬೆಂಗಳೂರು ರವರ ಮಾಹಿತಿಗಾಗಿ

3. ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ನೃಪತುಂಗ ರಸ್ತೆ ಬೆಂಗಳೂರು-1 ರವರ ಮಾಹಿತಿಗಾಗಿ

4. ಅಪರ ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ಧಾರವಾಡ ಮತ್ತು ಕಲಬುರ್ಗಿ ಇವರ ಮಾಹಿತಿಗಾಗಿ

5. ಜಂಟೀ ನಿರ್ದೇಶಕರು(ಆಡಳಿತ) ಆಯುಕ್ತರ ಕಛೇರಿ ಶಾಲಾ ಶಿಕ್ಷಣ ಇಲಾಖೆ ನೃಪತುಂಗ ರಸ್ತೆ ಬೆಂಗಳೂರು-1

6. ನಿರ್ದೇಶಕರು (ಪ್ರೌಢಶಿಕ್ಷಣ), ನಿರ್ದೇಶಕರು (ಮೈನಾರಿಟಿ) ಆಯುಕ್ತರ ಕಛೇರಿ ಶಾಲಾ ಶಿಕ್ಷಣ ಇಲಾಖೆ ನೃಪತುಂಗ ರಸ್ತೆ ಬೆಂಗಳೂರು-1

7. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ)ರವರ ಸೂಕ್ತ ಕ್ರಮಕ್ಕಾಗಿ

8. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮಾಹಿತಿ ಮತ್ತು ಸೂಕ್ತ ಕ್ರಮಕ್ಕಾಗಿ, ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ)ರವರ ಮುಖಾಂತರ

9. ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ / ಮಾಧ್ಯಮಿಕ /ಪ್ರೌಢಶಾಲಾ ಮುಖ್ಯಶಿಕ್ಷಕರ ಕ್ರಮಕ್ಕಾಗಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ರವರ ಮುಖಾಂತರ.

10. ಹಿರಿಯ ಸಹಾಯಕ ನಿರ್ದೇಶಕರು ಇ-ಆಡಳಿತ ರವರಿಗೆ ಸುತ್ತೋಲೆಯನ್ನು ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು

11. ಕಛೇರಿ ಪ್ರತಿ.